# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 833 |
| ಉತ್ತರಿಸಬೇಕಾದ ದಿನಾಂಕ | : 19.08.2025 |
| ಉತ್ತರಿಸಬೇಕಾದ ಸಚಿವರು | : ಮಾನ್ಯ ಮುಖ್ಯಮಂತ್ರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳೆಷ್ಟು; ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟಿವೆ; ಎಷ್ಟು ಜನ ನೊಂದಾಯಿತ ಹಾಲು ಉತ್ಪಾದಕರಿದ್ದಾರೆ; ದಿನಂಪ್ರತಿ ಎಷ್ಟು ಜನ ರೈತರು ಹಾಲು ಸರಬರಾಜು ಮಾಡುತ್ತಿದ್ದಾರೆ; ಹಾಲಿನ ಪ್ರೋತ್ಸಾಹಧನವನ್ನು ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು; ಸಾಮಾನ್ಯ, `ಪರಿಶಿಷ್ಟ ಜಾತಿ ಮತ್ತು ಪಂಗಡಗಳ ರೈತರ ಸಂಖ್ಯೆ ಎಷ್ಟಿದೆ; | ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳ ವ್ಯಾಪ್ತಿಯಲ್ಲಿ 16 ಜಿಲ್ಲಾ ಹಾಲು ಒಕ್ಕೂಟಗಳಿದ್ದು, 16,018 ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಕಾರ್ಯಾಚರಣೆಯಲ್ಲಿರುತ್ತವೆ. ಪ್ರಸ್ತುತ. ನೋಂದಾಯಿತ 27.03 ಲಕ್ಷ ಹಾಲು ಉತ್ಪಾದಕರಿದ್ದು, ಅದರಲ್ಲಿ ಜೂನ್-2025 ರ ಅಂತ್ಯಕ್ಕಿದ್ದಂತೆ 8,89,350 ಸಕ್ರಿಯ ಹಾಲು ಉತ್ಪಾದಕರಿಂದ ದಿನವಹಿ 99.00 ಲಕ್ಷ ಲೀ.ಹಾಲನ್ನು ಸರಬರಾಜು ಮಾಡಲಾಗುತ್ತಿದೆ. ವರ್ಗವಾರು ಸದಸ್ಯರ ಸಂಖ್ಯೆ ಈ ಕೆಳಕಂಡಂತಿದೆ.<br><br>ಸಾಮಾನ್ಯ ವರ್ಗ : 8,04,907<br>ಪರಿಶಿಷ್ಟ ಜಾತಿ : 51,210<br>ಪರಿಶಿಷ್ಟ ಪಂಗಡ : 33,233<br>..................................................<br>**ಒಟ್ಟು 8,89,350** |
| ಆ | ಹೈನುಗಾರಿಕೆ ನಡೆಸುವ ರೈತರಿಗೆ ಅನುಕೂಲವಾಗುವ ಕ್ಷೀರಧಾರೆ ಯೋಜನೆಯಡಿ ಪ್ರತಿ ಲೀಟರ್ ಹಾಲಿಗೆ ಎಷ್ಟು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ; 2023- ಏಪ್ರಿಲ್ ತಿಂಗಳಿನಿಂದ 2025 ಜುಲೈ ತಿಂಗಳ ಅಂತ್ಯದವರೆಗೆ ಎಷ್ಟು ಮೊತ್ತವನ್ನು ರೈತರಿಗೆ ಪ್ರೋತ್ಸಾಹಧನದ ಯೋಜನೆಯಡಿ ಪಾವತಿ ಮಾಡಲಾಗಿದೆ; ಪ್ರೋತ್ಸಾಹಧನವನ್ನು ಪಾವತಿ | ರಾಜ್ಯ ಸರ್ಕಾರವು ಹಾಲು ಉತ್ಪಾದಕರು ಸರಬರಾಜು ಮಾಡುವ ಪ್ರತಿ ಲೀ.ಗುಣಮಟ್ಟದ ಹಾಲಿಗೆ ರೂ.5/-ಗಳ ಪ್ರೋತ್ಸಾಹಧನವನ್ನು ನೀಡುತ್ತಿದೆ.<br><br>2023-ಏಪ್ರಿಲ್ ತಿಂಗಳಿನಿಂದ 2025 ಜುಲೈ ತಿಂಗಳ ಅಂತ್ಯದ ವರೆಗೆ ರೂ.3,578.63 ಕೋಟಿ ಮೊತ್ತವನ್ನು ರೈತರಿಗೆ ಪಾವತಿ ಮಾಡಲಾಗಿರುತ್ತದೆ.<br><br>ರಾಜ್ಯದ ಹಾಲು ಉತ್ಪಾದಕರಿಗೆ ಜೂನ್-2025ರ ವರೆಗೆ ಪ್ರೋತ್ಸಾಹಧನ ಪಾವತಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಹಾಲು ಉತ್ಪಾದಕರಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹಧನ ಪಾವತಿಗೆ ಯಾವುದೇ |

| | | |
|---|---|---|
| | ಮಾಡದೇ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ; ಬಾಕಿ ಮೊತ್ತವನ್ನು ಪಾವತಿಸಲು ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಬಾಕಿಯಿರುವುದಿಲ್ಲ. ಜುಲೈ-2025ರ ಪ್ರೋತ್ಸಾಹಧನದ ಬಿಲ್ಲುಗಳನ್ನು ಒಕ್ಕೂಟಗಳಿಂದ ಪಡೆದು ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳದಿಂದ ಸರ್ಕಾರಕ್ಕೆ ಸಲ್ಲಿಸಲು ಕ್ರಮವಹಿಸಲಾಗುವುದು. |
| ಇ | ರೈತರಿಂದ ಸಂಗ್ರಹಿಸಿದ ನಂದಿನಿ ಹಾಲು ಹಾಗೂ ಇತರೆ ಜಿಲ್ಲಾ ಮಟ್ಟದ ಸಹಕಾರಿ ಹಾಲು ಮಾರಾಟ ಮಂಡಳಿ ಮೂಲಕ ವಿತರಣೆ ಹಾಗೂ ಮಾರಾಟವಾಗುತ್ತಿದ್ದು, ದಿನಂಪ್ರತಿ ಜನರು ಹಣವನ್ನು ನೀಡಿ ಖರೀದಿಸುತ್ತಿರುವ ಹಾಗೂ ಹಾಲಿನ ಇತರ ಉತ್ಪನ್ನಗಳ ಮಾರಾಟದಿಂದ ಅಪಾರವಾಗಿ ಹಣ ಸಂಗ್ರಹವಾಗುತ್ತಿದೆ. ಮಾರಾಟ ಮಾಡುವಾಗ ಹೆಚ್ಚಿನ ದರದಲ್ಲಿ ಮಾರಾಟವಾಗುತ್ತಿದ್ದು, ಹಾಲಿನ ಪ್ರೋತ್ಸಾಹ ಧನವನ್ನು ರೈತರಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರಕ್ಕಿರುವ ತೊಂದರೆಯೇನು: | 2025-26 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2404-00-191-1-17ರ, ಉಪ ಶೀರ್ಷಿಕೆ 100-ಸಹಾಯಧನ ಅಡಿಯಲ್ಲಿ ರೂ.1554.00 ಕೋಟಿಗಳು, ಉಪ ಶೀರ್ಷಿಕೆ: 422 ರಡಿ ರೂ.87.60 ಕೋಟಿಗಳು ಮತ್ತು ಉಪ ಶೀರ್ಷಿಕೆ: 423 ರಡಿ ರೂ.58.40 ಕೋಟಿಗಳು ಸೇರಿ ಒಟ್ಟಾರೆ ರೂ.1700.00 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿದೆ.<br><br>ಮೊದಲು ಮತ್ತು ಎರಡನೇ ಕಂತಿನಲ್ಲಿ ಒಟ್ಟು ರೂ.850.00 ಕೋಟಿ ಅನುದಾನ ಬಿಡುಗಡೆಯಾಗಿದ್ದು, ರಾಜ್ಯದ ಎಲ್ಲಾ ವರ್ಗದ ಹಾಲು ಉತ್ಪಾದಕರಿಗೆ ಜೂನ್-2025 ರವರೆಗೆ ಪ್ರೋತ್ಸಾಹಧನವನ್ನು ಪಾವತಿಸಲಾಗಿದೆ.<br><br>ರಾಜ್ಯದಲ್ಲಿ ಹಾಲು ಉತ್ಪಾದಕರಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹಧನ ಪಾವತಿಗೆ ಯಾವುದೇ ಬಾಕಿಯಿರುವುದಿಲ್ಲ. ಜುಲೈ-2025ರ ಪ್ರೋತ್ಸಾಹಧನದ ಬಿಲ್ಲುಗಳನ್ನು ಒಕ್ಕೂಟಗಳಿಂದ ಪಡೆದು ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳದಿಂದ ಸರ್ಕಾರಕ್ಕೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |
| ಈ | ಪ್ರೋತ್ಸಾಹ ಧನ ನೀಡುವ ಪ್ರಕ್ರಿಯೆಯು ಕೆಲವೊಮ್ಮೆ ವರ್ಷಗಟ್ಟಲೆ ತೆಗೆದುಕೊಳ್ಳು ತ್ತಿರುವುದರಿಂದ ರೈತರನ್ನು ಆರ್ಥಿಕವಾಗಿ ಕುಂದಿಸಿದಂತೆ ಆಗುವುದಿಲ್ಲವೇ? (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತ ರಾಜ್ಯ ಸರ್ಕಾರದಿಂದ ಜೂನ್-2025 ರ ವರೆಗಿನ ಎಲ್ಲಾ ಪ್ರೋತ್ಸಾಹಧನವನ್ನು ಹಾಲು ಉತ್ಪಾದಕರಿಗೆ ಪಾವತಿಸಲಾಗಿರುತ್ತದೆ. |

**ಕಡತ ಸಂಖ್ಯೆ: ಸಿಒ 139 ಸಿಸಿಬಿ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ